RNI No. **KARBIL/2001/47147**

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೮ Volume 148	ಬೆಂಗಳೂರು, ಗುರುವಾರ, ಸೆಪ್ಟೆಂಬರ್ ೫, ೨೦೧೩ (ಭಾದ್ರಪದ ೧೪, ಶಕ ವರ್ಷ ೧೯೩೫) Bangalore, Thursday, September 5, 2013 (Bhadrapada 14, Shaka Varsha 1935)	ಸಂಚಿಕೆ ೩೬ Issue 36

ಭಾಗ ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 86 ಎಲ್‌ಡಬ್ಲ್ಯೂಎ 2013, ಬೆಂಗಳೂರು, ದಿನಾಂಕ 22-07-2013

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ **"ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ"** ಯನ್ನು ಅಧಿಸೂಚನೆ ಸಂಖ್ಯೆ : ಕಾಇ 179 ಎಲ್‌ಡಬ್ಲ್ಯೂಎ 2012, ದಿನಾಂಕ 20-12-2012 ರಲ್ಲಿ ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 03-12-2012 ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಘೋಷಿಸಲಾಗಿತ್ತು.

ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಅವಧಿಯನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ಪರಿಗಣಿಸಿದೆ. ಆದುದರಿಂದ, ಕೈಗಾರಿಕಾ ವಿವಾದಗಳ ಅಧಿನಿಯಮ 1947 (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **"ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ"** ಯನ್ನು ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 03.06.2013 ರಿಂದ ಜಾರಿಗೆ ಬರುವಂತೆ ಮುಂದಿನ 6 ತಿಂಗಳ ಅವಧಿಯವರೆಗೆ ವಿಸ್ತರಿಸಿ ಘೋಷಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಪ್ರಭುದೇವ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

PR. 417

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 87 ಎಲ್‌ಡಬ್ಲ್ಯೂಎ 2013, ಬೆಂಗಳೂರು, ದಿನಾಂಕ 22-07-2013

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ **"ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ"** ಯನ್ನು ಅಧಿಸೂಚನೆ ಸಂಖ್ಯೆ : ಕಾಇ 177 ಎಲ್‌ಡಬ್ಲ್ಯೂಎ 2012, ದಿನಾಂಕ 20-12-2012 ರಲ್ಲಿ ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 08-12-2012 ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಘೋಷಿಸಲಾಗಿತ್ತು.

ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಅವಧಿಯನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ಪರಿಗಣಿಸಿದೆ. ಆದುದರಿಂದ, ಕೈಗಾರಿಕಾ ವಿವಾದಗಳ ಅಧಿನಿಯಮ 1947 ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **"ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ"** ಯನ್ನು ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 08.06.2013 ರಿಂದ ಜಾರಿಗೆ ಬರುವಂತೆ ಮುಂದಿನ 6 ತಿಂಗಳ ಅವಧಿಯವರೆಗೆ ವಿಸ್ತರಿಸಿ ಘೋಷಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಪ್ರಭುದೇವ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

PR. 418

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 88 ಎಲ್‌ಡಬ್ಲ್ಯೂಎ 2013, ಬೆಂಗಳೂರು, ದಿನಾಂಕ 22–07–2013

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ **"ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ"** ಯನ್ನು ಅಧಿಸೂಚನೆ ಸಂಖ್ಯೆ : ಕಾಇ 30 ಎಲ್‌ಡಬ್ಲ್ಯೂಎ 2013, ದಿನಾಂಕ 06–02–2013 ರಲ್ಲಿ ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 15–12–2012 ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಘೋಷಿಸಲಾಗಿತ್ತು.

ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಅವಧಿಯನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ಪರಿಗಣಿಸಿದೆ. ಆದುದರಿಂದ, ಕೈಗಾರಿಕಾ ವಿವಾದಗಳ ಅಧಿನಿಯಮ 1947 (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **"ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ"** ಯನ್ನು ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 15.06.2013 ರಿಂದ ಜಾರಿಗೆ ಬರುವಂತೆ ಮುಂದಿನ 6 ತಿಂಗಳ ಅವಧಿಯವರೆಗೆ ವಿಸ್ತರಿಸಿ ಘೋಷಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಪ್ರಭುದೇವ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

PR. 419

HEALTH AND FAMILY WELFARE SECRETARIAT

NOTIFICATION

No. HFW 173 RGU 2013, BANGALORE, DATED 11-07-2013

Sub : Publication of seat matrix of Post Graduate Super Speciality Courses 2013-14.

1. Admission of Post Graduate Super Speciality Courses has been regulated by the Karnataka Medical Colleges (Conduct of Entrance Test and Selection of PGSSCs) Rules, 1981 and the RGUHS Ordinance governing Conduct of Entrance Test for Admission to PGSSCs- 2002.

2. Under clause -2(2)(g) d, the Vice-Chancellor, Rajiv Gandhi University of Health Sciences shall have power to prepare and approve the merit list of Post Graduate Super Speciality Course Entrance Test for Admission to Medical Colleges and the subsequent spot selection process up to the issue of seat allotment order. However, the allotment shall be on the basis of the seat matrix published by the Government based on the merit list of the PGSSCET – 2013 by reserving 50% of the seats to in-service candidates of the total seats in Government Autonomous Medical Institutions and in Private Medical Colleges.

3. It is necessary to publish the seat matrix in pursuit of allotment of candidates through counseling on the basis of merit secured in the PGSSCET – 2013 for the seats in Government Autonomous Medical Institutions and in Private Medical Colleges offering Post Graduate Super Speciality Courses during the current academic year 2013-14. Out of the total seats, 50% of the seats shall be reserved for in-service candidated and merit alone shall be the criteria for selection.

4. Reservation of 50% of the seats to in-service candidates does not confer any right to in-service candidates for being deputed to the Post Graduate Super Speciality Courses.

5. Therefore, Government of Karnataka hereby determines the intake of Post Graduate Super Speciality Courses in Government Autonomous Medical Institutions and in Private Medical Colleges under section 45 (10) (b) of the Rajiv Gandhi University of Health Sciences Act, 1994 and published seat matrix thereof applicable for the current academic year 2013-14 as specified in

Annexure. The Entrance Test Committee shall conduct the counseling and allot the candidates to the respective colleges in terms of the RGHUHS Ordinance governing conduct of Entrance Test for Admission to PGSSCs-2002.

By Order and in the name of the Governor of Karnataka,
MAHABOOB KHAN,
Under Secretary to the Government-2,
Health and Family Welfare Department.
(Medical Education).

ANNEXURE TO GOVERNMENT NOTIFICATION No. HFW 173 RGU 2013,

BANGALORE, DATED 11-07-2013

Sl. No.	Name of the College	Name of the Super Speciality Course	Total Govt. seats	In-service Quota	Entrance Quota
1	Bangalore Medical College & Research Institute, Bangalore	1. M.Ch. Plastic Surgery	04	02	02
		2. DM Neurology	02	01	01
		3. M.Ch. Surgical Gastroentrology	02	01	01
		4. M.Ch. Urology	02	01	01
		5. M.Ch. Paediatric Surgery	03	02	01
2	Kidwai Memorial Institute of Oncology, Bangalore	1. DM Oncology	06	03	03
		2. M.Ch. Surgical Oncology	08	04*	04
3	Vijayanagara Institute of Medical Sciences, Bellary	M.Ch. Urology	04	02	02
4	Sri Jayadeva Institute of Cardiovascular Sciences & Research, Bangalore	DM Cardiology	21	11**	10
		M.Ch. Cardio Thorasic Surgery	12	06	06
		DM Cardiac Anaesthesia	08	04	04
5	Institute of Nephro Urology Institute, Bangalore	M.Ch. Urology	06	03	03
		DM Nephrology	02	01	01
6	Indira Gandhi Institute of Child Health, Bangalore	M.Ch. Paediatric Surgery	01	-	01
7	J.S.S. Medical College, Mysore	D.M. Neurology	01	-	01
TOTAL SEATS			**82**	**41**	**41**

* One Surgical Oncology seats in reserved for the candidates who has done MS Ortho, MS ENT, MD OBG.

** One DM Cardiology seat is reserved for the candidate who has done MD Paediatrics.

Note : In respect of above colleges the candidates who have admitted under Government quota seat through PGET shall pay the fee fixed by the respective colleges.

MAHABOOB KHAN,
Under Secretary to the Government-2,
Health and Family Welfare Department.
(Medical Education).

PR. 422
SC. 50

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಆಕುಕ 162 ಪಿಟಿಡಿ 2013, ಬೆಂಗಳೂರು, ದಿನಾಂಕ 11-07-2013

ಆಯುಷ್ ಇಲಾಖೆಯಲ್ಲಿ ಪ್ರಾಚಾರ್ಯರು (ಆ), ಪ್ರಾಚಾರ್ಯರು (ಯುನಾನಿ) ಹಾಗೂ ಪ್ರಾಚಾರ್ಯರು (ಹೋಮಿಯೋಪತಿ) ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧದಲ್ಲಿರುವಂತೆ ಪ್ರಕಟಿಸಲಾಗುತ್ತಿದ್ದು, ಈ ಬಗ್ಗೆ ಬಾಧಿತರಿಂದ ಆಕ್ಷೇಪಣೆಗಳೇನಾದರೂ, ಇದ್ದಲ್ಲಿ ಈ ಅಧಿಸೂಚನೆ ಹೊರಡಿಸಿದ 15 ದಿನಗಳ ಒಳಗಾಗಿ, ತಮ್ಮ ಆಕ್ಷೇಪಣೆಗಳನ್ನು ಪೂರಕ ದಾಖಲೆಗಳೊಂದಿಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು ನಿಗದಿತ ಅವಧಿಯ ನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಕೆ.ಎನ್. ಹರಿಣಿಯಮ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾರತೀಯ ವೈದ್ಯ ಪದ್ಧತಿ ಮತ್ತು ಸಮನ್ವಯ)

ದಿನಾಂಕ 01-01-2013 ರಲ್ಲಿರುವಂತೆ ಪ್ರಾಚಾರ್ಯರು (ಆ), ಪ್ರಾಚಾರ್ಯರು (ಯು), ಪ್ರಾಚಾರ್ಯರು (ಹೋ) ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿ

ಕ್ರ. ಸಂ.	ಅಧಿಕಾರಿಯ ಹೆಸರು	ಮೀಸಲಾತಿ ವರ್ಗ	ಜನ್ಮ ದಿನಾಂಕ	ಸೇವೆಗೆ ಸೇರಿದ ದಿನಾಂಕ	ನೈಜವಾಗಿ ಮುಂಬಡ್ತಿ ಹೊಂದಿದ ದಿನಾಂಕ	ಷರಾ
01	ಪ್ರಾಚಾರ್ಯರು ಡಾ॥ ಹಸೀಬುನ್ನೀಸಾ (ಯು)	ಸಾಮಾನ್ಯ	07-12-1955	18-07-1981	11-10-2001	–
02	ಪ್ರಾಚಾರ್ಯರು ಡಾ॥ ಎ.ಎಲ್. ಪಾಟೀಲ್ (ಹೋ)	ಸಾಮಾನ್ಯ	01-07-1958	04-03-1999	31-08-2005	–
03	ಪ್ರಾಚಾರ್ಯರು ಡಾ॥ ಎಸ್.ಜಿ. ಮಂಗಲಗಿ	ಸಾಮಾನ್ಯ	21-07-1953	15-09-1980	21-04-2011	ಪ್ರಸ್ತುತ ಆಯುಷ್ ನಿರ್ದೇಶನಾಲಯದಲ್ಲಿ ದಿನಾಂಕ 16.02.2012 ರಿಂದ ಜಂಟಿ ನಿರ್ದೇಶಕರು (ವೈದ್ಯಕೀಯ ಶಿಕ್ಷಣ) ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಕೆ.ಎನ್. ಹರಿಣಿಯಮ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾರತೀಯ ವೈದ್ಯ ಪದ್ಧತಿ ಮತ್ತು ಸಮನ್ವಯ)

PR. 423
SC. 10

WATER RESOURCES SECRETARIAT

NOTIFICATION

No. WRD 147 MMK 2012, BANGALORE, DATED 12-03-2013

In exercise of the powers conferred under Section 4(a) of the Karnataka Transparency in Public Procurement Act, 1999 and as per clarification contained vide Circular No. PWD 381 FC-3/2006, dated 10-11-2006, the restoration work of breachs occurred on

08-10-2012 and 13-10-2012 in the vicinity of Krishnarajasagar Reservoir canals mentioned below are hereby declared and notified as emergent works, thus exempting them from the provisions of Karnataka Transparency in Public Procurement Act, 1999.

Details of Breaches occurred on 08-10-2012 :

Sl. No.	Name of the canal	Damaged chainages (In Kms.)
1	R.B.L.L.	6.60, 9.90, 10.40, 10.70, 11.00, 11.30, 11.60, 11.70, 12.00, 12.10, 12.60, 12.80, 12.90, 13.00, 13.40, 14.00, 14.30, 14.40 & 15.60
2	Devaraya Anecut Canal	3.345, 6.60, 6,835, 7.70, 11.345, 12.72, 16.29, 17.67, 17.75, 18.035, 20.87, 22.618, 23.13 & 25.02
3	Virija Anecut Canal	1.60, 1.86, 2.80, 3.13, 6.465, 10.53, 10.665, 10.16, 11.26, 12.93, 16.34, 17.34, 17.53, 19.74, 19.93, 20.465, 20.666, 20.73, 22.13, 22.33. 22.60, 22.80. & 29.20
4	Repair works to drain near Majjigepura Cross of road from MNP Circle to KRS.	

Details of Breaches occurred on 13-10-2012 :

Sl. No.	Name of the canal	Damaged chainages (In Kms.)
1	CDS Anecut Canal	21140 Mtrs.
2	Kumbargundi Pickup and Canal	1st , 2nd and 3rd Km.
3	Yeramane Pickup and Canal	2nd and 3rd Km.
4	V.C. Canal : 13B Dy. Canal	Mantap Pickup & its Canal and Toll-Gate Pickup Canal
5	V.C. Canal : 12th Dy. Canal	1st and 4th Km.
6	L.B.L.L. Canal	a. 3rd Mile near 18th sluice b. Near 1st and 2nd Acquaduct c. 5th Mile near 31st and 33rd sluice d. 7th Mile near Seethapura
7	Hirode Tank	Waste Weir

By Order and in the name of the Governor of Karnataka,

PR. 424
SC. 25

N. R. VIJAYASARATHI,
Officer on Special Duty (Tech., MMI-3),
Water Resources Department.

WATER RESOURCES SECRETARIAT

NOTIFICATION

No. WRD 108 NHP 2012, BANGALORE, DATED 01-03-2013

In exercise of the powers conferred under Section 4(a) of the Karnataka Transparency in Public Procurement Act, 1999 and as per clarification contained vide Circular No. PWD 381 FC-3/2006, dated 10-11-2006, the restoration work of breach occurred on 11-11-2012 at Ch:47.05 Km. of Hemavathy Left Bank Canal is hereby declared and notified as emergent work thus exempting it from the provisions of Karnataka Transparency in Public Procurement Act, 1999.

By Order and in the name of the Governor of Karnataka,

PR. 425
SC. 25

N. R. VIJAYASARATHI,
Officer on Special Duty (Tech., MMI-3),
Water Resources Department.

HOME SECRETARIAT

NOTIFICATION

No. HD 192 POSAE 2013, BANGALORE, DATED 09-07-2013

In exercise of the powers conferred by section 20B of the Karnataka Police Act, 1963 (Karnataka Act 4 of 1964), the Government of Karnataka hereby reconstitutes the Police Establishment Board for the purpose of exercising such functions as may be assigned to it, by or under the said Act to the Police Establishment Board consisting of the following namely :-

1	Sri Lalrokhuma Pachau, Director General & Inspector General of Police	Chairman
2	Sri M.N. Reddi, Additional Director General of Police (Law & Order)	Member
3	Sri Raghavendra H. Auradkar, Additional Director General of Police & Commissioner of Police, Bangalore City	Member
4	Sri Megkarikh N.S., Additional Director General of Police (Crime and Technical Services)	Member
5	Sri Alok Mohan, Additional Director General of Police (Administration)	Member-Secretary

By Order and in the name of the Governor of Karnataka,

T.N. RAVIPRAKASH,

Under Secretary to the Government,

Home Department.

(Police Services-A).

PR. 426

SC. 250

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಒಇ 84 ಕಗೃಸೇ 2013, ಬೆಂಗಳೂರು, ದಿನಾಂಕ 16-07-2013

ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಶಾಇ 37 ಶಾಸನ 2010, ದಿನಾಂಕ 06-04-2011 ರನ್ವಯ ಕರ್ನಾಟಕ ಗೃಹರಕ್ಷಕ ಕಾಯ್ದೆ 1962 (ತಿದ್ದುಪಡಿ) ಕಾಯ್ದೆ 2003ರ ಉಪ ಕಲಂ 2(ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ತುಮಕೂರು ಜಿಲ್ಲಾ ಗೌರವ ಸಮಾದೇಷ್ಟರಾಗಿ ಶ್ರೀ ಕೆ. ರವಿಕುಮಾರ್ ಇವರನ್ನು ಎರಡನೇ ಅವಧಿಗೆ ದಿನಾಂಕ 23-10-2013 ರಿಂದ 23-10-2018ರ ವರೆಗೆ ಅಥವಾ ಮುಂದಿನ ಆದೇಶದವರೆಗೆ ಮರು ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಡಿ.ಎಸ್. ಜೋಗೋಜೆ,

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ.

(ಪೊಲೀಸ್ ಸಹಾಯಕ ಸೇವೆಗಳು)

PR. 427

SC. 20

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಒಇ 412 ಪಿಎಂಎಸ್ 2011, ಬೆಂಗಳೂರು, ದಿನಾಂಕ 12–07–2013

1872ರ ಇಂಡಿಯನ್ ಕ್ರಿಶ್ಚಿಯನ್ ಮ್ಯಾರೇಜ್ ಕಾಯಿದೆಯ ಕಲಂ 7ರ (ಕೇಂದ್ರ ಕಾಯ್ದೆ XV-1872) ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ Shri S. Ravindra Prakash, No. 16, 13th Cross, Thammanna Garden, Lingarajapuram, St. Thomas Nagar Post, Bangalore ಇವರನ್ನು ಕ್ರಿಶ್ಚಿಯನ್ ಧರ್ಮದ ಉಪಪಂಗಡಗಳಲ್ಲಿರುವ ಕ್ರಿಶ್ಚಿಯನ್ನರಿಗೆ ಧರ್ಮ ಮತ್ತು ಸಂಪ್ರದಾಯಬದ್ಧವಾಗಿ ವಿವಾಹವನ್ನು ನೋಂದಾಯಿಸಲು ಅಡಚಣೆಗಳು ಇರುವವರಿಗೆ ಕ್ರಿಶ್ಚಿಯನ್ ಸಂಪ್ರದಾಯದ ಪ್ರಕಾರ ವಿವಾಹ ನೋಂದಣಿ ಮಾಡಿಕೊಟ್ಟು ವಿವಾಹವನ್ನು ಊರ್ಜಿತಗೊಳಿಸುವ ಉದ್ದೇಶಕ್ಕಾಗಿ ಮಾತ್ರ ಬೆಂಗಳೂರು ನಗರಕ್ಕೆ ಸೀಮಿತಗೊಳಿಸಿ ಮೇಲಿನ ಕಾಯಿದೆಯಡಿಯಲ್ಲಿ ಸೂಚಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿಗೊಳಪಟ್ಟು ಕ್ರಿಶ್ಚಿಯನ್ ಜನಾಂಗದ ವಿವಾಹ ನೋಂದಣಾಧಿಕಾರಿಯನ್ನಾಗಿ ಕಾರ್ಯನಿರ್ವಹಿಸಲು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ನಾಗಭೂಷಣ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ.
(ರಹದಾರಿ ಮತ್ತು ವಿದೇಶಿಯರು)

PR. 428
SC. 25

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಿಆಸುಇ 72 ಸಅಸೇ 2013, ಬೆಂಗಳೂರು, ದಿನಾಂಕ 28–06–2013

ಶ್ರೀ ಅಬ್ದುಲ್ ಖದೀರ್, ಸರ್ಕಾರದ ಅಪರ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ ಸುಧಾರಣೆ–ಇ ಆಡಳಿತ) ಇವರ ಜನ್ಮ ದಿನಾಂಕವನ್ನು ಸೇವಾ ಪುಸ್ತಕದಲ್ಲಿ ತಿದ್ದುಪಡಿ ಮಾಡುವ ಬಗ್ಗೆ The KARNATAKA STATE SERVANTS (DETERMINATION OF AGE) ACT, 1974 ರ ಸೆಕ್ಷನ್ 5(3) ರನ್ವಯ ವಿಚಾರಣೆಯನ್ನು ನಡೆಸುವ ಸಲುವಾಗಿ ಸರ್ಕಾರದ ಉಪ ಕಾರ್ಯದರ್ಶಿ (ಅಭಿಪ್ರಾಯ–1), ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವೆಗಳು–6) ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಿದೆ.

ವಿಚಾರಣಾಧಿಕಾರಿಗಳು ಈ ಪ್ರಕರಣದ ವಿಚಾರಣೆಯನ್ನು ನಡೆಸಿ, 3 (ಮೂರು) ತಿಂಗಳೊಳಗಾಗಿ ತಮ್ಮ ಸ್ಪಷ್ಟ ಅಭಿಪ್ರಾಯಗಳನ್ನೊಳಗೊಂಡ ವಿಚಾರಣಾ ವರದಿಯನ್ನು ಅಧಿಕಾರಿಯವರ ನೇಮಕಾತಿ ಪ್ರಾಧಿಕಾರವಾಗಿರುವ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ ಹಾಗೂ ಈ ಪ್ರಕರಣದಲ್ಲಿ ವಿಚಾರಣಾಧಿಕಾರಿಯವರು ನಿಯಮಾನುಸಾರ ಸಂಚಿತ ಸಂಭಾವನೆಯನ್ನು ಮತ್ತು ಮಂಡನಾಧಿಕಾರಿಯವರು ನಿಯಮಾನುಸಾರ ದಿನ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆಂದು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಚಂದ್ರಶೇಖರ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. (ಸೇವೆಗಳು–6)

PR. 430

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 52 ಎಲ್‌ಡಬ್ಲ್ಯೂಎ 2013, ಬೆಂಗಳೂರು, ದಿನಾಂಕ 22–07–2013

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಸೆಕ್ಷನ್–2 (ಎನ್) (vi) ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸಾರ್ವಜನಿಕ ಹಿತದೃಷ್ಟಿಯಿಂದ "ಸಕ್ಕರೆ ಉದ್ದಿಮೆ" ಯನ್ನು ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಘೋಷಿಸಲಾಗಿತ್ತು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಪ್ರಭುದೇವ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

PR. 431

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 80 ಎಲ್‌ಡಬ್ಲ್ಯೂಎ 2013, ಬೆಂಗಳೂರು, ದಿನಾಂಕ 22–07–2013

ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ **"ಇಂಡಸ್ಟ್ರಿ ಜನರೇಟಿಂಗ್ ಪವರ್"** ಉದ್ಯಮವನ್ನು ಅಧಿಸೂಚನೆ ಸಂಖ್ಯೆ : ಕಾಇ 43 ಎಲ್‌ಡಬ್ಲ್ಯೂಎ 2013, ದಿನಾಂಕ 14–02–2013 ರಲ್ಲಿ

ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 03–01–2013 ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ಘೋಷಿಸಲಾಗಿತ್ತು.

ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಅವಧಿಯನ್ನು ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ಪರಿಗಣಿಸಿದೆ. ಆದುದರಿಂದ, ಕೈಗಾರಿಕಾ ವಿವಾದಗಳ ಅಧಿನಿಯಮ 1947ರ (ಕೇಂದ್ರಾಧಿನಿಯಮ 1947ರ ಸಂಖ್ಯೆ : 14) ಕಲಂ 2 ಖಂಡ (ಎನ್) ಉಪಖಂಡ (6)ರ ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ **"ಇಂಡಸ್ಟ್ರಿ ಜನರೇಟಿಂಗ್ ಪವರ್"** ಉದ್ಯಮವನ್ನು ಸಾರ್ವಜನಿಕ ಉಪಯುಕ್ತ ಸೇವೆ ಎಂಬುದಾಗಿ ದಿನಾಂಕ 03.07.2013 ರಿಂದ ಮುಂದಿನ 6 ತಿಂಗಳ ಅವಧಿಯವರೆಗೆ ಜಾರಿಯಲ್ಲಿರುವಂತೆ ವಿಸ್ತರಿಸಿ ಘೋಷಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಪ್ರಭುದೇವ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ

PR. 432

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಕಾಇ 215 ಎಲ್‌ಇಟಿ 2013, ಬೆಂಗಳೂರು, ದಿನಾಂಕ : 31–07–2013.

ಶ್ರೀ ಇ. ಲಕ್ಷ್ಮಪ್ಪ, ಉಪ ಕಾರ್ಮಿಕ ಆಯುಕ್ತರು ಮತ್ತು ಉಪ ಕಾರ್ಯದರ್ಶಿ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು, ಇವರನ್ನು ಶ್ರೀ ಜಿ. ಮಂಜುನಾಥ್, ಉಪ ಕಾರ್ಮಿಕ ಆಯುಕ್ತರು, ಬೆಳಗಾವಿ ಪ್ರಾದೇಶಿಕ, ಇವರ ವರ್ಗಾವಣೆಯಿಂದ ತೆರವಾದ ಖಾಲಿ ಹುದ್ದೆಗೆ ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತ ದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವರ್ಗಾಯಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಪ್ರಭುದೇವ
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಕಾರ್ಮಿಕ ಇಲಾಖೆ.

P.R. 433

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ನಅಇ 52 ಯುಡಬ್ಲ್ಯೂಇ 2013, ಬೆಂಗಳೂರು, ದಿನಾಂಕ : 18–07–2013.

ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾಯ್ದೆ 1973ರ ಕಲಂ 4(2)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಶ್ರೀ ವಿನಯಕುಮಾರ್ ಸೊರಕೆ, ನಗರಾಭಿವೃದ್ಧಿ ಸಚಿವರು ಇವರನ್ನು ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧ್ಯಕ್ಷರನ್ನಾಗಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎಂ. ವಾಸುದೇವರಾವ್
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

P.R. 434

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ನಅಇ 274 ಮೈಅಪ್ರಾ 2013, ಬೆಂಗಳೂರು, ದಿನಾಂಕ : 09–07–2013.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 4(ಎ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ ಕರ್ನಾಟಕ ಸರ್ಕಾರವು ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ಪಟ್ಟಣ ಪಂಚಾಯಿತಿ ಎಲ್ಲೆಯ ಕ್ಷೇತ್ರವನ್ನೇ **"ಬೆಳ್ತಂಗಡಿ ಸ್ಥಳೀಯ ಯೋಜನಾ ಪ್ರದೇಶ"** ವೆಂದು ದಿನಾಂಕ : 08–07–2013 ರಿಂದ ಜಾರಿಗೆ ಬರುವಂತೆ ಈ ಮೂಲಕ ಘೋಷಿಸಿದೆ. ಹಾಗೂ ಸದರಿ ಕಾಯ್ದೆಯ ಕಲಂ 2(7)(ಬಿ) ರನ್ವಯ ಬೆಳ್ತಂಗಡಿ ಪಟ್ಟಣ ಪಂಚಾಯತಿಯೇ ಯೋಜನಾ ಪ್ರಾಧಿಕಾರವಾಗಿ ಕೆಲಸ ನಿರ್ವಹಿಸತಕ್ಕದೆಂದು ಆದೇಶಿಸುತ್ತಾ ಸದರಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸುವ ಮಹಾಯೋಜನೆ ಸರ್ಕಾರದಿಂದ ಅನುಮೋದನೆಯಾಗಿ ವಲಯ ನಿಯಮಾವಳಿಗಳು ಜಾರಿಗೆ ಬರುವವರೆಗೆ ಅಭಿವೃದ್ಧಿಗಳನ್ನು ನಿಯಂತ್ರಿಸಲು ಸಮೀಪದ ಬಂಟ್ವಾಳ ಪಟ್ಟಣದ ಪುರಸಭೆ ಯೋಜನಾ ಪ್ರಾಧಿಕಾರದ ಚಾಲ್ತಿ ವಲಯ ನಿಯಮಾವಳಿಗಳನ್ನು ಅನುಸರಿಸಲು ಅನುಮತಿಸಲಾಗಿದೆ.

ಅನುಬಂಧ–1 ರಲ್ಲಿ ಬೆಳ್ತಂಗಡಿ ಪಟ್ಟಣ ಪಂಚಾಯಿತಿಯ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ವಿವರಗಳನ್ನು ಯೋಜನಾ ಪ್ರದೇಶಕ್ಕೆ ಎಲ್ಲೆಯ ವಿವರಗಳನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎಂ. ವಾಸುದೇವರಾವ್
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

P.R. 435
SC-50

CO-OPERATION SECRETARIAT

NOTIFICATION No: CO 37 CLM 2013, Bangalore, Dated : 08-07-2013.

In exercise of the powers conferred by sub-section (5) of Section 2A of Karnataka Co-operative Societies Act, 1959 and in supersession of entries under Serial No. VII-A and VII-B of Notification No. CO 201 CLM 2008, Bangalore, dated : 27-05-2010 the Government of Karnataka hereby confers on the category of officers specified in column (2) of the table below, the powers of the Registrar of Co-operative Societies under the provisions of the Karnataka Co-operative societies Act 1959 and Karantaka Co-operative Societies Rules 1960. specified in corresponding entries in column (3), in respect of Co-operative Societies specified in column (2) thereof, namely :-

TABLE

Sl. No.	Powers delegated to the Joint Registrar of Co-operative Societies of the following Co-operative Societies	Powers delegated
1	2	3
VII-A	Joint Registrar of Co-operative Societies attached to the Karnataka State Co-operative Urban Bank Federation Limited, Bangalore Under Rule 441 of the Karnataka Civil Service Rules **With Head quarters at Bangaluru** All Urban Co-operative Banks whose registered office is situated in the Districts of Bangaluru and Mysore Regions. **With Head quarters at Hubli** All Urban Co-operative Banks whose registered office is situated in the Districts of Belgavi and Gulbarga Regions.	Section.- 69,70, 70A, 71 (except clause (b) and (c) of sub-section(1) of Section 71, 103 and 117. Rules.- 31 and 56.

.

By Order and in the name of the Governor of Karnataka,
G.S. RAMANAREDDY
Officer on Special Duty & Ex-officio
Joint Secretary to Government,
Co-operation Department.

P.R. 436
SC-100

ಕಂದಾಯ ಸಚಿವಾಲಯ

ಸಂಖ್ಯೆ: ಕಂಇ 40 ವಿಮಕ 2013ಬೆಂಗಳೂರು, ದಿನಾಂಕ: 16.07.2013.

ಅಧಿಸೂಚನೆ

ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 4(1)(ಬಿ) ಅಡಿಯಲ್ಲಿ ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಸಚಿವಾಲಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ಸಾರ್ವಜನಿಕರ ತಿಳುವಳಿಕೆಗಾಗಿ ಈ ಕೆಳಕಂಡಂತೆ ಪ್ರಕಟಿಸಲಾಗಿದೆ.

2005ರ ಮಾಹಿತಿ ಹಕ್ಕು ಅಧಿನಿಯಮದ ಕಲಂ 4(1) (ಬಿ) ರಡಿ ಕಂದಾಯ ಇಲಾಖೆಯ ಸಚಿವಾಲಯ ಹಂತದ ಸೂಚನಾ ಪಟ್ಟಿ

(i) ಕಂದಾಯ ಇಲಾಖೆಯ ಸಚಿವಾಲಯದ ಅಂಗ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳು


ಸಚಿವ ಸಂಪುಟದ ಸದಸ್ಯರುಗಳಾದ ಸನ್ಮಾನ್ಯ ಶ್ರೀ ವಿ. ಶ್ರೀನಿವಾಸ ಪ್ರಸಾದ್ ರವರು ಕಂದಾಯ ಖಾತೆ ಸಚಿವರಾಗಿರುತ್ತಾರೆ ಹಾಗೂ ಸನ್ಮಾನ್ಯ ಶ್ರೀ ಪ್ರಕಾಶ್ ಬಿ. ಹುಕ್ಕೇರಿ ರವರು ಮುಜರಾಯಿ ಖಾತೆ ಸಚಿವರಾಗಿರುತ್ತಾರೆ.

ಸರ್ಕಾರದ ಸಚಿವಾಲಯದ ಕಂದಾಯ ಇಲಾಖೆಯಲ್ಲಿ ಒಬ್ಬರು ಪ್ರಧಾನ ಕಾರ್ಯದರ್ಶಿಗಳು ಹಾಗೂ ಮತ್ತೊಬ್ಬರು ಕಾರ್ಯದರ್ಶಿಯಾಗಿರುತ್ತಾರೆ. ಪ್ರಧಾನ ಕಾರ್ಯದರ್ಶಿಗಳು ಭೂ ಮಾಪನ ಮತ್ತು ಭೂದಾಖಲೆ, ಭೂ ಸುಧಾರಣೆ, ಕಂದಾಯ ಸೇವೆಗಳು, ಭೂಸ್ವಾಧೀನ, ಭೂ ಮಂಜೂರಾತಿ, ಎಲ್ಲಾ ಪಾಲಿಸಿ ವಿಷಯಗಳು (All Policy Matters), ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು, ಅಟಲ್‌ಜೀ ಜನಸ್ನೇಹಿ ಕೇಂದ್ರಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ (KPLC) ಸಕಾಲ ಯೋಜನೆ, ಕೆ.ಎ.ಟಿ., ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ ಮಂಡಳಿ ಮತ್ತು ಇಲಾಖೆಯ ಸಮಗ್ರ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ. ಹಾಗೆಯೇ ಸರ್ಕಾರದ ಕಾರ್ಯದರ್ಶಿ (ವಿಪತ್ತು ನಿರ್ವಹಣೆ) ಇವರು ಪ್ರಕೃತಿ ವಿಕೋಪ ನಿರ್ವಹಣೆ (Disaster Management). ನೋಂದಣಿ ಮತ್ತು ಮುದ್ರಾಂಕ, ಭೂ ದಾಖಲೆಗಳ ಗಣಕೀಕರಣ ವ್ಯವಸ್ಥೆ (ಭೂಮಿ ಮತ್ತು ಯುಪಿಓಆರ್) ಹಾಗೂ ಮುಜರಾಯಿ ವಿಷಯಕ್ಕೆ ಸಂಬಂಧಿಸಿದ ಮೇಲ್ವಿಚಾರಣಾ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಂದಾಯ ಇಲಾಖೆಯ ಸಚಿವಾಲಯದ ಅಂಗರಚನೆಯನ್ನು ಈ ಮುಂದಿನ ಚಾರ್ಟ್‌ನಲ್ಲಿ ತೋರಿಸಲಾಗಿದೆ.

ಕಂದಾಯ ಇಲಾಖೆಯ ಸಂಘಟನಾ ಚಾರ್ಟ್ (ಸಚಿವಾಲಯದಲ್ಲಿ)

ಅಂಗರಚನೆ



ಕಂದಾಯ ಇಲಾಖೆಯು ತನ್ನ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕ್ಷೇತ್ರ ಇಲಾಖೆ: ನಿಗಮ:ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆಡಳಿತಾತ್ಮಕ ಮತ್ತು ಆರ್ಥಿಕ ವಿಷಯಗಳಿಗೆ ಸಂಬಂಧಿಸಿದ ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ:

ಕ್ರ ಸಂ	ಕಂದಾಯ ಇಲಾಖೆಯ ಅಧೀನಕ್ಕೊಳಪಡುವ ಅಧೀನ ಇಲಾಖೆಗಳು: ಶಾಸನ ಬದ್ದ ಸ್ವಾಯತ್ತ ಸಂಸ್ಥೆಗಳು
1	ಪ್ರಾದೇಶಿಕ ಆಯುಕ್ತರು, ಬೆಂಗಳೂರು
2	ಪ್ರಾದೇಶಿಕ ಆಯುಕ್ತರು, ಮೈಸೂರು
3	ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ
4	ಪ್ರಾದೇಶಿಕ ಆಯುಕ್ತರು, ಬೆಳಗಾವಿ
5	ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ
6	ಆಯುಕ್ತರು, ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆ
7	ಅಧ್ಯಕ್ಷರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ
8	ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ
9	ಆಯುಕ್ತರು, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಬಾಗಲಕೋಟೆ
10	ಆಯುಕ್ತರು, ಕೂಡಲಸಂಗಮ ಅಭಿವೃದ್ಧಿ ಮಂಡಳಿ, ಬಾಗಲಕೋಟೆ.
11	ಆಯುಕ್ತರು, ಬಸವಕಲ್ಯಾಣ ಅಭಿವೃದ್ಧಿ ಮಂಡಳಿ
12	ಆಯುಕ್ತರು, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಬ್ಯಾಡಗಿ ತಾಲ್ಲೂಕು, ಹಾವೇರಿ ಜಿಲ್ಲೆ.
13	ಆಯುಕ್ತರು, ಸನ್ನತಿ ಅಭಿವೃದ್ಧಿ ಮಂಡಳಿ, ಸನ್ನತಿ ಗ್ರಾಮ, ಗುಲ್ಬರ್ಗಾ ಜಿಲ್ಲೆ.
14	ಆಯುಕ್ತರು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಬೈಲಹೊಂಗಲ
15	ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ, ಬೆಂಗಳೂರು.
16	ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು, ಬೆಂಗಳೂರು
17	ನಿರ್ದೇಶಕರು, **ಅಟಲ್ ಜೀ ಜನಸ್ನೇಹಿ ಕೇಂದ್ರಗಳು (ನೆಮ್ಮದಿ), ಬೆಂಗಳೂರು**
18	ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದೇವಿಕಾ ರಾಣಿ ಮತ್ತು ರೋರಿಕ್ ಎಸ್ಟೇಟ್ ಮಂಡಳಿ, ಬೆಂಗಳೂರು

ಕಂದಾಯ ಇಲಾಖೆಯು ನಿರ್ವಹಿಸುವ ಪ್ರಮುಖ ಕಾರ್ಯಗಳು ಕೆಳಕಂಡಂತಿವೆ:

1. ರಾಜ್ಯದಲ್ಲಿ ಭೂದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭೂಮಾಪನ
2. ಭೂ ಕಂದಾಯ, ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ಉಪಕರ ಮತ್ತು ತೆರಿಗೆಗಳ ವಸೂಲಾತಿ, ಗ್ರಾಮಠಾಣ, ಗೋಮಾಳ, ಗುಂಡುತೋಪು, ಕೆರೆ ಅಂಗಳ, ಉಪವನಗಳು ಇತ್ಯಾದಿ ಸಮುದಾಯ ಜಮೀನುಗಳೂ ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆ
3. ಭೂ ಮಂಜೂರಾತಿ
4. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿರ್ಬಂಧನೆಗಳ ನಿರ್ವಹಣೆ
5. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜಮೀನು ರಕ್ಷಣೆ
6. ಭೂ ಪರಿವರ್ತನೆ
7. ಸ್ಥಿರಾಸ್ತಿಗಳ ಮೇಲಿನ ಬಾಡಿಗೆ ನಿಯಂತ್ರಣ
8. ಸಾರ್ವಜನಿಕ ಉದ್ದೇಶಕ್ಕಾಗಿ ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸುವುದು
9. ಸ್ಥಿರಾಸ್ತಿಗಳ ವ್ಯವಹಾರ, ಉಯಿಲು, ಒಪ್ಪಂದ ಇತ್ಯಾದಿಗಳ ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಸೂಲಾತಿ
10. ಹಿಂದೂ ಧಾರ್ಮಿಕ ಸ್ಥಳಗಳ ನಿಯಂತ್ರಣ ಮತ್ತು ಅಭಿವೃದ್ಧಿ

(ii) ಕಂದಾಯ ಇಲಾಖೆಯ ಸಚಿವಾಲಯದ ಅಧಿಕಾರಿಗಳು ಮತ್ತು ನೌಕರರ ವಿವರ ಹಾಗೂ ಕರ್ತವ್ಯಗಳು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
1.	ಸರ್ಕಾರದ ಪ್ರಧಾನ ಕಾರ್ಯದರ್ಶಿ ಕೊಠಡಿ ಸಂ:505, 5ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಅಧಿಕೃತ ಮುಖ್ಯಸ್ಥರಾಗಿದ್ದು, ಇಲಾಖಾ ಸಚಿವರ ನಿರ್ದೇಶನಗಳನ್ನು ಕಾಯ್ದೆ ಮತ್ತು ನಿಯಮಗಳ ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ಕಂದಾಯ ಇಲಾಖೆಯ ವಿಷಯಗಳನ್ನು ವಿಲೇವಾರಿ ಮಾಡುವ ಮತ್ತು ಎಲ್ಲಾ ವ್ಯವಹಾರದ ನಿರ್ವಹಣೆಯ ಜವಾಬ್ದಾರಿ ಹೊಂದಿರುತ್ತಾರೆ. ಹಾಗೂ ಇವರು ಭೂ ಮಾಪನ ಮತ್ತು ಭೂ ದಾಖಲೆ, ಭೂ ಸುಧಾರಣೆ, ಕಂದಾಯ ಸೇವೆಗಳು,

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
		ಭೂ ಸ್ವಾಧೀನ; ಭೂ ಮಂಜೂರಾತಿ ಎಲ್ಲಾ ಪಾಲಿಸಿ ವಿಷಯಗಳು (All Policy Matters), ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು, ಅಟಲ್‌ಜೀ ಜನಸ್ನೇಹಿ ಕೇಂದ್ರಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ (KPLC) ಸಕಾಲ ಯೋಜನೆ, ಕೆ.ಎ.ಟಿ., ಬಸವ ಕಲ್ಯಾಣ ಅಭಿವೃದ್ಧಿ ಮಂಡಳಿ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ, ಕೂಡಲ ಸಂಗಮ ಅಭಿವೃದ್ಧಿ ಮಂಡಳಿ, ರೋರಿಕ್ ಮತ್ತು ದೇವಿಕಾರಾಣಿ ರೋರಿಕ್ ಎಸ್ಟೇಟ್ ಮಂಡಳಿ ಮತ್ತು ಇಲಾಖೆಯ ಸಮಗ್ರ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ. ಇಲಾಖೆಯ ಅಧೀನ ಸಿಬ್ಬಂದಿಯ ಮೇಲ್ವಿಚಾರಣೆ ಮತ್ತು ನಿಯಂತ್ರಣದ ಅಧಿಕಾರವನ್ನು ಹೊಂದಿರುವರು. ಇಲಾಖೆಗೆ ಸಂಬಂಧಿಸಿದ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.
2.	ಸರ್ಕಾರದ ಕಾರ್ಯದರ್ಶಿ (ವಿಪತ್ತು ನಿರ್ವಹಣೆ/ ಭೂಮಿ ಮತ್ತು ಯುಪಿಓಆರ್) 5ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯಲ್ಲಿ ಅಧಿಕಾರ ಪ್ರತ್ಯಾಯೋಜನೆ ಪ್ರಕಾರ ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ, ಮುಜರಾಯಿ ವಿಷಯಗಳ ಬಗ್ಗೆ ಇಲಾಖಾ ಸಚಿವರುಗಳ ನಿರ್ದೇಶನಗಳನ್ನು ಕಾನೂನು ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ವಿಲೇವಾರಿ ಮಾಡುವ ಜವಾಬ್ದಾರಿ ಹೊಂದಿರುವರು ಹಾಗೂ ಭೂಮಿ ಯೋಜನೆ ಮತ್ತು ನಗರ ಆಸ್ತಿ ಮಾಲೀಕತ್ವದ ಹಕ್ಕು (Urban Property Ownership Right) (UPOR) ಯೋಜನೆಯ ಪರಿಣಾಮಕಾರಿ ನಿರ್ವಹಣೆಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವರು ಹಾಗೂ ಸದರಿ ವಿಷಯಗಳಲ್ಲಿ ನೀತಿ ನಿರ್ಧಾರ ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.
3.	ಸರ್ಕಾರದ ಅಪರ ಕಾರ್ಯದರ್ಶಿ (ಭೂ ಸುಧಾರಣೆ, ಭೂ ಸುಧಾರಣಾ ಕೋಶ, ವಿಶೇಷ ಕೋಶ, ಮತ್ತು ಭೂ ಮಂಜೂರಾತಿ) 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಭೂ ಮಂಜೂರಾತಿ, ಭೂ ಸುಧಾರಣೆ ಮತ್ತು ಭೂ ಸುಧಾರಣಾ ಕೋಶ/ ವಿಶೇಷ ಕೋಶ, ಉಪ ವಿಭಾಗಾಧಿಕಾರಿಗಳು ಮತ್ತು ಮೇಲ್ಪಟ್ಟ ಉನ್ನತ ಅಧಿಕಾರಿಗಳಿಗೆ ಸಂಬಂಧಿಸಿದ ಎಲ್ಲಾ ಸೇವಾ ವಿಷಯಗಳು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯದ ಎಲ್ಲಾ ವಿಷಯಗಳು, ಅಟಲ್ ಜನಸ್ನೇಹಿ (ನೆಮ್ಮದಿ) ಯೋಜನೆಗೆ ಸಂಬಂಧಿಸಿದಂತೆ ನಿರ್ದೇಶನಾಲಯದಿಂದ ಬರುವ ಎಲ್ಲಾ ವಿಷಯಗಳು, ಸಕಾಲ ಯೋಜನೆಗೆ ಸಂಬಂಧಿಸಿದ ಎಲ್ಲಾ ಪಾಲಿಸಿ ವಿಷಯಗಳು ಹಾಗೂ ಶಾಖೆಗಳಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಸದರಿ ಶಾಖೆಗಳ ಅಧೀನ ಸಿಬ್ಬಂದಿ ಮೇಲೆ ನಿಯಂತ್ರಣ ಹೊಂದಿರುವರು.
4.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ಸುಧಾರಣಾ ಶಾಖೆಯಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಯ ನಿಯಂತ್ರಣ ಹೊಂದಿರುವರು
5.	ಶಾಖಾಧಿಕಾರಿ ಭೂಸುಧಾರಣೆ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ಅದರಡಿಯ ನಿಯಮಗಳು, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನಿಯಮಗಳಿಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು. **ಅ) ಹಿರಿಯ ಸಹಾಯಕರು:** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ಕಾಯ್ದೆ ಮತ್ತು ನಿಯಮಗಳಿಗೆ ತಿದ್ದುಪಡಿ. 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ಕರ್ನಾಟಕ ಭೂಸುಧಾರಣೆ ಕಾಯ್ದೆ ಕಲಂ 48ರಂತೆ ಪಿ.ಟಿ.ಸಿ.ಎಲ್ ಕಾಯ್ದೆ ಅಡಿ ಬರುವ ಜಮೀನು ಪರಭಾರೆ ವಿಷಯ. 4. ವಿಧಾನ ಸಭೆ, ವಿಧಾನ ಪರಿಷತ್ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). ಇತರೇ (ಮಿಸಲೇನಿಯಸ್) ವಿಷಯಗಳು.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
		ಆ) ಸಹಾಯಕರು–1: 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 61ರಂತೆ ಮತ್ತು ಪಿ.ಟಿ.ಸಿ.ಎಲ್ ಕಾಯ್ದೆ ಕಲಂ 4(2)ರ ಅಡಿ ಬರುವ ಜಮೀನು ಪರಭಾರೆ ವಿಷಯ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಮೈಸೂರು ವಿಭಾಗ). 4. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಮೈಸೂರು ವಿಭಾಗ). 5. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 48ರಡಿ ಭೂ ನ್ಯಾಯ ಮಂಡಳಿಯ ಸದಸ್ಯರ ನಾಮ ನಿರ್ದೇಶನ ಇತ್ಯಾದಿ ವಿಷಯ. 6. ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನೀತಿ ವಿಷಯಗಳು. **ಇ) ಸಹಾಯಕರು–2** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 2. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 3. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗ). **ಈ) ಸಹಾಯಕರು–3 (ಸಾಂಖ್ಯಿಕ ನಿರೀಕ್ಷಕರು):** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿಯಲ್ಲಿ ಬರುವ ನಿಯತಕಾಲಿಕ ಅಂಕಿ ಅಂಶಗಳ ಕ್ರೂಢೀಕೃತ ಮಾಹಿತಿ. 2. ಅಂಕಿ–ಅಂಶಗಳಿಗೆ ಸಂಬಂಧಪಟ್ಟ ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳ ವಿಷಯ 3. ಆಯವ್ಯಯಕ್ಕೆ ಸಂಬಂಧಿಸಿದ ಮಾಹಿತಿ, ರಾಜ್ಯಪಾಲರ ಭಾಷಣಕ್ಕೆ ಮಾಹಿತಿ, ಕೇಂದ್ರ ಸರ್ಕಾರಕ್ಕೆ ಮಾಹಿತಿ ಒದಗಿಸುವ ವಿಚಾರ. 4. ತಾಲ್ಲೂಕು ಭೂ ನ್ಯಾಯ ಮಂಡಳಿಗಳ ಪ್ರಕರಣಗಳ ವಿಲೇ ವರದಿ ಕ್ರೂಢೀಕರಣ. 5. ಗೇಣಿ ಅರ್ಜಿಗಳ ಮತ್ತು ಹೆಚ್ಚುವರಿ ಭೂಮಿ ಹಂಚಿಕೆ ಪ್ರಗತಿ ವರದಿಗಳು. **ಉ) ಕಿರಿಯ ಸಹಾಯಕರು:** ಶಾಖೆಯಲ್ಲಿನ ಸ್ವೀಕೃತಿಗಳನ್ನು ಸ್ವೀಕರಿಸುವುದು, ವಿಷಯ ನಿರ್ವಾಹಕರಿಗೆ ಗುರುತಿಸುವುದು, ಕಡತಗಳನ್ನು ಸೃಷ್ಟಿಸುವುದು, ಚಲನವಲನವನ್ನು ನಮೂದಿಸಿ ರವಾನಿಸುವುದು, ಮುಕ್ತಾಯ –ಗೊಂಡ ಕಡತಗಳನ್ನು ದಾಖಲಾತಿ ವಿಭಾಗಕ್ಕೆ ಕಳುಹಿಸಲು ಕ್ರಮ ಕೈಗೊಳ್ಳುವುದು ಮತ್ತು ಇತರೆ ಕೆಲಸಗಳು.
6.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ ಕೋಶ ಮತ್ತು ಭೂ ಕಂದಾಯ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯಗಳ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ ಹಾಗೂ ಭೂ ಕಂದಾಯ ವಿಷಯಗಳ ನಿರ್ವಹಣೆ.

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
7.	ಶಾಖಾಧಿಕಾರಿ (ಭೂ ಸುಧಾರಣಾ ಕೋಶ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ. **ಅ) ಹಿರಿಯ ಸಹಾಯಕರು:** ಕಂದಾಯ ಇಲಾಖೆಯ ಜಿಲ್ಲಾ ಕಛೇರಿ ಸಂಕೀರ್ಣ, ಮಿನಿವಿಧಾನಸೌಧ ನಿರ್ಮಾಣ, ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ರಿಟ್‌ಅರ್ಜಿ/ಅಪೀಲು ಮತ್ತು ಎಸ್.ಎಲ್.ಪಿ.ಗಳ ಕುರಿತ ವಿಷಯಗಳು **ಆ) ಸಹಾಯಕರು–1:** ಕಂದಾಯ ಇಲಾಖೆಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ವಿಷಯ, ವಾಹನ ಖರೀದಿ ಮಂಜೂರಾತಿ, ನ್ಯಾಯಾಲಯ ವಿಷಯಗಳು, ಕಾರ್ಯನೀತಿ ವಿಷಯ. **ಇ) ಸಹಾಯಕರು–2** ಕಂದಾಯ ಇಲಾಖೆಯ ವೇತನೇತರ ಅನುದಾನ ಬಿಡುಗಡೆಗೆ ಸಂಬಂಧಿಸಿದ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
8.	ಶಾಖಾಧಿಕಾರಿ (ಭೂ ಕಂದಾಯ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ಕಂದಾಯ ಕಾಯ್ದೆ ಮತ್ತು ಅದರಡಿಯ ನಿಯಮಗಳ ವಿಷಯಗಳು, ಭೂ ಕಂದಾಯ ಮನ್ನಾ, ಖಾತಾ ಬದಲಾವಣೆ ಮತ್ತು ದೂರುಗಳು, ಮ್ಯುಟೇಷನ್ ವಿವಾದ, ಡಿ.ಸಿ.ಬಿ., ಬ್ಯಾಂಕ್ ಸಾಲ ವಸೂಲಿ, ಎಸ್.ಎಲ್. ಬಿ.ಸಿ. ವಿಷಯಗಳು, ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ಪರಿಗಣಿಸಿ ವಸೂಲಿ ಮಾಡುವುದು. **ಅ) ಹಿರಿಯ ಸಹಾಯಕರು:** **ಮೈಸೂರು ಮತ್ತು ಗುಲ್ಬರ್ಗಾ ವಿಭಾಗಗಳಿಗೆ ಸಂಬಂಧಿಸಿದ ಈ ಕೆಳಕಾಣಿಸಿದ ವಿಷಯಗಳು** 1 ಎಲ್ಲಾ ವಿಭಾಗಗಳ ಭೂ ಕಂದಾಯ ಮನ್ನಾ ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸುವುದು 2 ಖಾತಾ ಬದಲಾವಣೆಯ ಬಗ್ಗೆ ಬಂದ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 3 ಖಾತೆ:ಮ್ಯುಟೇಷನ್‌ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು. 4 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ ಪರಿಷತ್ ಪ್ರಶ್ನೆಗಳು,ಅರ್ಜಿ ಸಮಿತಿ, ಭರವಸೆ ಇತ್ಯಾದಿ ವಿಷಯಗಳು. 5 ಮೇಲಿನ ವಿಷಯಗಳಿಗೆ ಸಂಬಂಧಿಸಿದ ಮಾಹಿತಿ ಹಕ್ಕು ಅಧಿನಿಯಮದ ಅಡಿಯಲ್ಲಿ ಸಲ್ಲಿಸಿದ ಅರ್ಜಿಗಳು. 6 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ ಮಾಡುವ ವಿಷಯಗಳು. **ಆ) ಸಹಾಯಕರು–1:** ಬೆಳಗಾಂ ಮತ್ತು ಬೆಂಗಳೂರು ವಿಭಾಗಗಳಿಗೆ ಸಂಬಂಧಿಸಿದ ವಿಷಯಗಳು 1 ಖಾತಾ ಬದಲಾವಣೆಯ ಸಂಬಂಧ ಬರುವ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದ ಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 2 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು 3 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ ಪರಿಷತ್ ಪ್ರಶ್ನೆಗಳು, ಅರ್ಜಿಸಮಿತಿ, ಭರವಸೆ ಇತ್ಯಾದಿ ವಿಷಯಗಳು

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
		ಇ) ಸಹಾಯಕರು-2 1 ಡಿ.ಸಿ.ಬಿಯನ್ನು ತಯಾರಿಸುವುದು. 2 ಬ್ಯಾಂಕ್ ಸಾಲ ವಸೂಲು ಮಾಡುವುದು 3 ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ವಸೂಲು ಮಾಡುವುದು 4 ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಸಭೆಗೆ ಸಂಬಂಧಿಸಿದ ವಿಷಯಗಳು (ಎಸ್.ಎಲ್.ಬಿ.ಸಿ). 5 ಬೆಳೆ ಅಂಕಿ ಅಂಶಗಳ ಯೋಜನೆಗೆ ಸಂಬಂಧಿಸಿದ ವಿಷಯಗಳು. 6 ಆಣೇವಾರಿಗೆ ಸಂಬಂಧಿಸಿದ ವಿಷಯಗಳು. 7. ವಿಧಾನಸಭೆ:ವಿಧಾನ ಪರಿಷತ್‌ಗೆ ಸಂಬಂಧಿಸಿದ ಅರ್ಜಿ, ಭರವಸೆ, ಪ್ರಶ್ನೆ ಇತ್ಯಾದಿ ವಿಷಯಗಳು 8 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ನ್ಯಾಯಾಲಯದ ಪ್ರಕರಣಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿಗೆ ಕಳುಹಿಸುವುದು.
9.	ಸರ್ಕಾರದ ಅಧೀನ ಕಾರ್ಯದರ್ಶಿ, ಭೂ ಮಂಜೂರಾತಿ-1 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001	ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ, ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ /ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತದ ವಿಷಯಗಳು.
10.	ಶಾಖಾಧಿಕಾರಿ ಭೂ ಮಂಜೂರಾತಿ-1 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆ, ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ / ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತದ ವಿಷಯಗಳು. **ಅ) ಹಿರಿಯ ಸಹಾಯಕರು:** ಬೆಂಗಳೂರು ಗ್ರಾಮಾಂತರ ಜಿಲ್ಲೆ, ರಾಮನಗರ ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಭೂ ಮಂಜೂರಾತಿ ನಿಯಮಗಳು, ಭೂ ಮಂಜೂರಾತಿಗೆ / ಭೂ ಪರಿವರ್ತನೆಗೆ ಸಂಬಂಧಿಸಿದಂತೆ ಕಂದಾಯ ನಿಯಮಗಳು ಹಾಗೂ ಭೂ ಕಂದಾಯ ಕಾಯ್ದೆಗೆ ತಿದ್ದುಪಡಿ ತರುವ ಹಾಗೂ ಇನ್ನಿತರ ಪಾಲಿಸಿ ವಿಷಯಗಳು. **ಆ) ಸಹಾಯಕರು-1:** ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು, ಸರ್ಕಾರಿ ಜಮೀನು ಒತ್ತುವರಿ ಮತ್ತು ಹರಾಜಿಗೆ ಸಂಬಂಧಿಸಿದ ವಿಷಯಗಳು,

ಕ್ರ. ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸುತ್ತಿರುವ ಕರ್ತವ್ಯಗಳು
		ಇ) ಸಹಾಯಕರು–2 ಕೋಲಾರ ಜಿಲ್ಲೆ, ಚಿಕ್ಕಬಳ್ಳಾಪುರ ಜಿಲ್ಲೆ, ಶಿವಮೊಗ್ಗ ಜಿಲ್ಲೆ, ಹಾಸನ ಜಿಲ್ಲೆ, ಕೊಡಗು ಜಿಲ್ಲೆಗಳಿಗೆ ಸಂಬಂಧಿಸಿದ ಸರ್ಕಾರಿ ಜಮೀನು ಮಂಜೂರಾತಿಗೆ ಸಂಬಂಧಿಸಿದ ವಿಷಯಗಳು, ಪಿಟಿಸಿಎಲ್ ಕಾಯ್ದೆ ಅಡಿಯಲ್ಲಿ ಅನುಮತಿ ನೀಡುವ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
11.	ಪೀಠಾಧಿಕಾರಿ/ ಶಾಖಾಧಿಕಾರಿ ಭೂ ಮಂಜೂರಾತಿ–2 ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಕಿರಿಯ ಸಹಾಯಕರು ಈ) ದಲಾಯತ್	ಚಿಕ್ಕಮಗಳೂರು, ಉಡುಪಿ, ದಕ್ಷಿಣ ಕನ್ನಡ, ಮೈಸೂರು, ಮಂಡ್ಯ, ಉತ್ತರಕನ್ನಡ ಮತ್ತು ಚಾಮರಾಜನಗರ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು. **ಅ) ಹಿರಿಯ ಸಹಾಯಕರು:** ಚಿಕ್ಕಮಗಳೂರು, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳ ನಿರ್ವಹಣೆ **ಆ) ಸಹಾಯಕರು** ಮೈಸೂರು, ಮಂಡ್ಯ, ಉತ್ತರಕನ್ನಡ ಮತ್ತು ಚಾಮರಾಜನಗರ ಜಿಲ್ಲೆಗಳ ಭೂಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್. ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
